ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

# ಪತ್ರಿಕಾ ತುಣುಕುಗಳು
# PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 20/12/19

## ಮೂರ್ತಿ ಅಮಾನತು ಎತ್ತಿ ಹಿಡಿದ ಹೈಕೋರ್ಟ್

**ಬೆಂಗಳೂರು:** ವಿಧಾನಸಭೆ ಕಾರ್ಯದರ್ಶಿ ಹುದ್ದೆಯಿಂದ ಅಮಾನತುಗೊಳಿಸಿದ್ದ ವಿಧಾನಸಭೆ ವಿಶೇಷ ಮಂಡಳಿ ಹೊರಡಿಸಿರುವ ಆದೇಶಕ್ಕೆ ತಡೆ ನೀಡಲು ಕೋರಿ ಎಸ್.ಮೂರ್ತಿ ಮೇಲ್ಮನವಿಯನ್ನು ಹೈಕೋರ್ಟ್ ಗುರುವಾರ ವಜಾಗೊಳಿಸಿದೆ. ಸಿಜೆ ಎ.ಎಸ್. ಓಕ್ ನೇತೃತ್ವದ ವಿಭಾಗೀಯ ಪೀಠ ಪ್ರಕಟಿಸಿದೆ.

ಅರ್ಜಿದಾರರ ಅಹವಾಲು ಆಲಿಸದೆ ವಿಧಾನಸಭಾಧ್ಯಕ್ಷರು ವಿವೇಚನೆಯಡಿಯಲ್ಲಿ ಅಮಾನತು ಮಾಡಿದ್ದಾರೆ. ಆದ್ದರಿಂದ ಆದೇಶ ರದ್ದುಗೊಳಿಸಬೇಕು ಎಂದು ಮೂರ್ತಿ ಕೋರಿದ್ದರು. ಆದರೆ ಅವರ ಮನವಿಯನ್ನು ಕೋರ್ಟ್ ತಳ್ಳಿಹಾಕಿದ್ದು, ಏಕಸದಸ್ಯ ಪೀಠದ ಆದೇಶ ಸರಿ ಇದೆ ಎಂದು ಪ್ರತಿಪಾದಿಸಿದೆ.






2016 ಹಾಗೂ 2017ನೇ ಸಾಲಿನಲ್ಲಿ ಬೆಳಗಾವಿಯ ಸುವರ್ಣಸೌಧದಲ್ಲಿ ನಡೆದ ಚಳಿಗಾಲದ ಅಧಿವೇಶನಕ್ಕೆ ಸಂಬಂಧಿಸಿದಂತೆ ಕೈಗೊಳ್ಳಲಾದ ಕಾಮಗಾರಿ ಹಾಗೂ ಇತರ ಖರ್ಚು ವೆಚ್ಚಗಳಲ್ಲಿ ಅವ್ಯವಹಾರ ನಡೆದಿದೆ ಎಂಬ ಆರೋಪ ಎಸ್.ಮೂರ್ತಿ ಅವರ ಮೇಲಿತ್ತು. ಬಳಿಕ ಮುಖ್ಯಮಂತ್ರಿ ಅಧ್ಯಕ್ಷತೆಯ ಶಾಸಕಾಂಗ ವಿಶೇಷ ಮಂಡಳಿಯ ಆದೇಶದ ಅನುಸಾರ ವಿಧಾನಸಭೆ ಕಾರ್ಯದರ್ಶಿಯಾಗಿದ್ದ ಎಸ್.ಮೂರ್ತಿಯನ್ನು 2018ರ ಡಿ.27ರಂದು ಸೇವೆಯಿಂದ ಅಮಾನತುಗೊಳಿಸಲಾಗಿತ್ತು.